**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ದಂಡಾಧಿಕಾರಿಗಳು,**
**ಹೆಗ್ಗಡದೇವನಕೋಟೆ.**

## **ಸಿ.ಸಿ. 325/2020**

| | | |
|---|---|---|
| ಸಾಕ್ಷಿದಾರರ ಹೆಸರು | : | ಚಿಕ್ಕಸ್ವಾಮಿ |
| ತಂದೆಯ ಹೆಸರು | : | ಸಿದ್ಧರಾಮೇಗೌಡ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ನಾಯಕನಹುಂಡಿ ಗ್ರಾಮ, ಹೆಚ್.ಡಿ. ಕೋಟೆ ತಾ. |

**ಸಾಕ್ಷಿಯನ್ನು ದಿನಾಂಕಃ 23.12.2022 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರ ಶ್ರೀ. ಬಿ.ವಿ.ಎಸ್. ವಕೀಲರಿಂದಃ**

ನಾನು ಪಿರ್ಯಾದುದಾರನಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ನಾನು ಆರೋಪಿ ಮಹೇಂದ್ರನಾಥ, ಇವರಿಗೆ ರೂ. 5,00,000/– ಹಣ ನೀಡಿದ್ದು, ಸದರಿ ಹಣವನ್ನು ಪಾವತಿಸುವ ಸಲುವಾಗಿ ಆರೋಪಿ ದಿನಾಂಕಃ 03.08.2020 ರ '063340' ಸಂಖ್ಯೆ ಇರುವ ಒಂದು ಚೆಕ್ ನ್ನು ನೀಡಿದ್ದು, ಅದನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.–1 ಎಂದು ಗುರುತಿಸಲಾಯಿತು. ನಾನು ಆರೋಪಿಯ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನಿ.ಪಿ.–1 ರಲ್ಲಿರುವ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿ.ಪಿ.–1(ಎ) ಎಂದು ಗುರುತಿಸಲಾಯಿತು.

ಆರೋಪಿ ನೀಡಿದ ಚೆಕ್ ಅನ್ನು ನಗಧೀಕರಣಕ್ಕಾಗಿ ಸಿಂಡಿಕೇಟ್ ಬ್ಯಾಂಕ್, ಹೆಚ್.ಡಿ. ಕೋಟೆ ಶಾಖೆಗೆ ಹಾಜರುಪಡಿಸಿದಾಗ, ಸದರಿ ಬ್ಯಾಂಕಿನವರು funds insufficient ಎಂದು

ಹಿಂಬರಹ ನೀಡಿರುತ್ತಾರೆ. ಸದರಿ ಹಿಂಬರಹವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-2 ಎಂದು ಗುರುತಿಸಲಾಯಿತು.

ದಿನಾಂಕಃ **25.08.2020** ರಂದು ನನ್ನ ವಕೀಲರ ಮುಖಾಂತರ ಆರೋಪಿಗೆ ಕಳುಹಿಸಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-3 ಎಂದು ಗುರುತಿಸಲಾಯಿತು.

02 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-4 ಮತ್ತು ನಿ.ಪಿ.-5 ಎಂದು ಗುರುತಿಸಲಾಯಿತು.

ಆರೋಪಿಗೆ ಕಳುಹಿಸಿದ ಲೀಗಲ್ ನೋಟೀಸ್ ಅವರ ಎರಡೂ ವಿಳಾಸಕ್ಕೂ ಜಾರಿಯಾಗಿದ್ದು, ಜಾರಿಯಾಗಿ ಬಂದ 02 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-6 ಮತ್ತು ನಿ.ಪಿ.-7 ಎಂದು ಗುರುತಿಸಲಾಯಿತು.

ಆರೋಪಿ ತನ್ನ ವಕೀಲರ ಮೂಲಕ ದಿನಾಂಕಃ **14.09.2020** ರಂದು ಮರು ಉತ್ತರ ನೀಡಿದ್ದು, ಸದರಿ ಮರು ಉತ್ತರದ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-8 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ದೂರಿನಲ್ಲಿ ಹೇಳಿರುವಂತೆ ಆರೋಪಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ** ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿಜೆ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**